27

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಾನಸಿಕ ಆರೋಗ್ಯ ಆರೈಕೆ ಕಾಯಿದೆ-2017 ರನ್ವಯ ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರವನ್ನು ರಚಿಸುವ ಹಾಗೂ ಪ್ರಾಧಿಕಾರಕ್ಕೆ ಸದಸ್ಯರುಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** 1. ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017- ಕೇಂದ್ರ ಸರ್ಕಾರದ ಗೆಜೆಟ್ ದಿನಾಂಕ:07-04-2017.

2. ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಕಾರ್ಯದರ್ಶಿಯವರ ಪತ್ರ ಸಂಖ್ಯೆ: ಕೆ.ಎಸ್.ಎಂ.ಹೆಚ್.ಎ/04/2017-18, ದಿ:14.8.2018

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:07-04-2017 ರ ಕೇಂದ್ರ ಗೆಜೆಟ್‌ನಲ್ಲಿ ಭಾರತ ಸರ್ಕಾರವು ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ನ್ನು ಪ್ರಕಟಿಸಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ, ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಕಾರ್ಯದರ್ಶಿಯವರು ಕೇಂದ್ರ ಸರ್ಕಾರದ ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ರ ಸೆಕ್ಷನ್ 46ರಂತೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಹಾಗೂ ಸೆಕ್ಷನ್ 52 (1)ರನ್ವಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯನ್ನು (ಮಾನಸಿಕ ಆರೋಗ್ಯ ಉಸ್ತುವಾರಿ) ಒಳಗೊಂಡಂತೆ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರವನ್ನು ರಚಿಸಬೇಕಾಗಿರುತ್ತದೆ ಮತ್ತು ಸದರಿ ಮಾನಸಿಕ ಆರೋಗ್ಯ ಪ್ರಾಧಿಕಾರಕ್ಕೆ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಮನೋವೈದ್ಯಕೀಯ ವಿಭಾಗ, ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಇವರನ್ನು ವೈದ್ಯಕೀಯ ಸಲಹೆಗಾರರನ್ನಾಗಿ ನೇಮಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 44 ಸಿಜಿಇ 2018**
**ಬೆಂಗಳೂರು, ದಿನಾಂಕ:17-10-2018**

ಕೇಂದ್ರ ಸರ್ಕಾರದ ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017 ರನ್ವಯ, ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರವನ್ನು ರಚಿಸಿ, ಮೊದಲನೇ ಹಂತದಲ್ಲಿ ಪ್ರಾಧಿಕಾರಕ್ಕೆ ಈ ಕೆಳಕಂಡಂತೆ ಅಧ್ಯಕ್ಷರು, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ವೈದ್ಯಕೀಯ ಸಲಹೆಗಾರರು ಮತ್ತು ಅಧಿಕಾರಿ ಸದಸ್ಯರುಗಳನ್ನು ನೇಮಿಸಿ ಆದೇಶಿಸಲಾಗಿದೆ.

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2. | ಆಯುಕ್ತರು,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು | ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ |

....2

17/10/18

| | | |
|---|---|---|
| 3. | ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಮನೋವೈದ್ಯಕೀಯ ವಿಭಾಗ, ಬೆಂಗಳೂರು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು. | ವೈದ್ಯಕೀಯ ಸಲಹೆಗಾರರು |
| 4. | ಉಪ ಕಾರ್ಯದರ್ಶಿ-2, ಆಕುಕ ಇಲಾಖೆ | ಸದಸ್ಯರು |
| 5. | ನಿರ್ದೇಶಕು, ಆಕುಕ (ಸೇವೆಗಳು) | ಸದಸ್ಯರು |
| 6. | ಜಂಟಿ/ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| 7. | ಜಂಟಿ/ಉಪ ಕಾರ್ಯದರ್ಶಿ/ಪ್ರತಿನಿಧಿ, ಗೃಹ ಇಲಾಖೆ | ಸದಸ್ಯರು |
| 8. | ಜಂಟಿ/ಉಪ ಕಾರ್ಯದರ್ಶಿ/ಪ್ರತಿನಿಧಿ, ಆರ್ಥಿಕ ಇಲಾಖೆ | ಸದಸ್ಯರು |
| 9. | ಜಂಟಿ/ಉಪ ಕಾರ್ಯದರ್ಶಿ/ಪ್ರತಿನಿಧಿ, ಕಾನೂನು ಇಲಾಖೆ | ಸದಸ್ಯರು |
| 10. | ನಿರ್ದೇಶಕರು, ನಿಮ್ಹಾನ್ಸ್, ಬೆಂಗಳೂರು | ಸದಸ್ಯರು |
| 11. | ನಿರ್ದೇಶಕರು, ನಿಮ್ಹಾನ್ಸ್, ಧಾರವಾಡ | ಸದಸ್ಯರು |
| 12. | ಉಪ ನಿರ್ದೇಶಕರು, (ಮಾನಸಿಕ ಆರೋಗ್ಯ) ಆಕುಕ (ಸೇವೆಗಳು) | ಸದಸ್ಯರು |

ಈ ಸಂಬಂಧ ಹೊರಡಿಸಲಾಗಿದ್ದ ದಿ:27-08-2018 ರ ಇದೇ ಸಮ ಸಂಖ್ಯೆಯ ಆದೇಶವನ್ನು ರದ್ದುಗೊಳಿಸಿದೆ.

ಕೇಂದ್ರ ಮಾನಸಿಕ ಆರೋಗ್ಯ ನಿಯಮಗಳು, 2018ರ ಸಂಬಂಧಿತ ನಿಯಮಗಳಲ್ಲಿ ನಮೂದಿಸಿರುವ ಪ್ರಕ್ರಿಯೆಯನ್ನು ಅನುಸರಿಸಿದ ನಂತರ ಪ್ರಾಧಿಕಾರಕ್ಕೆ ಅಧಿಕಾರೇತರ ಸದಸ್ಯರುಗಳನ್ನು ಸೇರ್ಪಡೆಗೊಳಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/10/18

**(ಹೆಚ್.ಸಿ. ಹರ್ಷರಾಣಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ
(ಆರೋಗ್ಯ 1&2)

17/10

ಗೆ:

1. ಆಯುಕ್ತರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ಕಾರ್ಯದರ್ಶಿಗಳು, ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ, ವಿಕ್ಟೋರಿಯಾ ಆಸ್ಪತ್ರೆ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.

...3

4. ಉಪ ನಿರ್ದೇಶಕರು, (ಮಾನಸಿಕ ಆರೋಗ್ಯ) ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
5. ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಮನೋವೈದ್ಯಕೀಯ ವಿಭಾಗ, ಬೆಂಗಳೂರು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ-2, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ/ ಗೃಹ ಇಲಾಖೆ/ಆರ್ಥಿಕ ಇಲಾಖೆ, ಕಾನೂನು ಇಲಾಖೆ,
8. ನಿರ್ದೇಶಕರು, ನಿಮ್ಹಾನ್ಸ್, ಬೆಂಗಳೂರು
9. ನಿರ್ದೇಶಕರು, ನಿಮ್ಹಾನ್ಸ್, ಧಾರವಾಡ

**ಪ್ರತಿ:**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ
2. ಪ್ರಧಾನ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಆಕುಕ ಇಲಾಖೆ, ವಿಕಾಸಸೌಧ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

616

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017 ರನ್ವಯ ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರಕ್ಕೆ ಅಧಿಕಾರೇತರ ಸದಸ್ಯರುಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:-**

1. ಮಾನಸಿಕ ಆರೋಗ್ಯ ಆರೈಕೆ ಕಾಯಿದೆ (The Mental Healthcare Act. 2017) ಕೇಂದ್ರ ಸರ್ಕಾರದ ಗೆಜೆಟ್ ದಿನಾಂಕ:07.04.2017
2. ಸರ್ಕಾರದ ಆದೇಶ ಸಂಖ್ಯೆ: ಆಕುಕ 44 ಸಿಜಿಇ 2018, ದಿನಾಂಕ:17.10.2018
3. ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಏಕ ಕಡತ ಸಂಖ್ಯೆ: ಕೆ.ಎಸ್.ಎಂ.ಹೆಚ್.ಎ /11/ 2018-19.

Office of the Director of Health & F.W.S. Bangalore 45984 27/11/2020

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ(1)ರ ದಿನಾಂಕ:07.04.2017ರ ಕೇಂದ್ರ ಗೆಜೆಟ್‌ನಲ್ಲಿ ಭಾರತ ಸರ್ಕಾರವು ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ನ್ನು ಪ್ರಕಟಿಸಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಸರ್ಕಾರದ ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017 ರನ್ವಯ, ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರವನ್ನು ರಚಿಸಿ, ಮೊದಲನೇ ಹಂತದಲ್ಲಿ ಪ್ರಾಧಿಕಾರಕ್ಕೆ ಅಧ್ಯಕ್ಷರು, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ವೈದ್ಯಕೀಯ ಸಲಹೆಗಾರರು ಮತ್ತು ಅಧಿಕಾರಿ ಸದಸ್ಯರುಗಳನ್ನು ನೇಮಿಸಿ ಆದೇಶಿಸಲಾಗಿದೆ. ಕೇಂದ್ರ ಮಾನಸಿಕ ಆರೋಗ್ಯ ನಿಯಮಗಳು, 2018ರ ಸಂಬಂಧಿತ ನಿಯಮಗಳಲ್ಲಿ ನಮೂದಿಸಿರುವ ಪ್ರಕ್ರಿಯೆಯನ್ನು ಅನುಸರಿಸಿದ ನಂತರ ಪ್ರಾಧಿಕಾರಕ್ಕೆ ಅಧಿಕಾರೇತರ ಸದಸ್ಯರುಗಳನ್ನು ಸೇರ್ಪಡೆಗೊಳಿಸಲಾಗುವುದೆಂದು ಸಹ ಆದೇಶದಲ್ಲಿ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(3) ರ ಏಕ ಕಡತದಲ್ಲಿ ಆಯುಕ್ತರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು ಹಾಗೂ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ಇವರು ಕೇಂದ್ರ ಸರ್ಕಾರದ ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ರನ್ವಯ ಅಧಿಕಾರಯುತ ಸದಸ್ಯರುಗಳನ್ನು ನೇಮಿಸಲಾಗಿದ್ದು, ಸದರಿ ಕಾಯಿದೆಯ ಸೆಕ್ಷನ್ 46(1)ರಂತೆ (ಜಿ) ನಿಂದ (ಎನ್) ರವರೆಗೆ ಅಧಿಕಾರೇತರ ಸದಸ್ಯರನ್ನು ದಿನಪತ್ರಿಕೆಗಳಲ್ಲಿ ಜಾಹೀರಾತುಗಳ ಮೂಲಕ ಹಾಗೂ ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಣೆಗೆ ಕರೆ ನೀಡಿ ಅರ್ಜಿಗಳನ್ನು ಪಡೆದು ನಾಮ ನಿರ್ದೇಶನ ಮಾಡಬೇಕಾಗಿರುತ್ತದೆಂದು ತಿಳಿಸಿರುತ್ತಾರೆ. ಈ ಸಂಬಂಧ ದಿನಾಂಕ:04.01.2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ ಹಾಗೂ ಅಧ್ಯಕ್ಷರು, ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿ, ಆಯ್ಕೆ ಮಾಡಲಾಗಿರುವ ಅಧಿಕಾರೇತರ ಸದಸ್ಯರುಗಳನ್ನು ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರಕ್ಕೆ ನೇಮಿಸಿ ಆದೇಶ ಹೊರಡಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ:

ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ಸಂಖ್ಯೆ 106 ದಿನಾಂಕ 28/1/20 ಬೆಂಗಳೂರು

**ಸರ್ಕಾರದ ಆದೇಶ ಸಂಖ್ಯೆ: ಆಕುಕ 44 ಸಿಜಿಇ 2018,**

**ಬೆಂಗಳೂರು, ದಿನಾಂಕ: 20.01.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ರ ಸೆಕ್ಷನ್ 46(1)ರನ್ವಯ, ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರಕ್ಕೆ ಈ ಕೆಳಕಂಡ ಅಧಿಕಾರೇತರ ಸದಸ್ಯರುಗಳನ್ನು ನೇಮಿಸಿ ಆದೇಶಿಸಲಾಗಿದೆ.

DDMH (Mental health)
On file 24/11/2020

| ಕ್ರ.ಸಂ | ಹೆಸರು | ಸದಸ್ಯರು |
|---|---|---|
| 1 | ಡಾ॥ ಜಗದೀಶ್ ಎ, ಹಿರಿಯ ಮನೋವೈದ್ಯರು, ಅಭಯ ಆಸ್ಪತ್ರೆ, ವಿಲ್ಸನ್ ಗಾರ್ಡನ್, ಬೆಂಗಳೂರು ಮೊ: 9035016740 | ಸದಸ್ಯರು |
| 2 | ಡಾ॥ಟಿ.ಬಿ.ಬಿ.ಎಸ್.ವಿ ರಮಣಯ್ಯ, ಮನೋವೈದ್ಯಕೀಯ ಸಮಾಜ ಕಾರ್ಯಕರ್ತರು ನಿವೃತ್ತ ಪ್ರಾಧ್ಯಾಪಕರು, ಸಮಾಜ ಕಾರ್ಯ ವಿಭಾಗ ಮೈಸೂರು ವಿಶ್ವವಿದ್ಯಾಲಯ, ಮೈಸೂರು ಮೊ: 9845298626 | ಸದಸ್ಯರು |
| 3 | ಡಾ॥ ಮಂಜುಳ ಎಮ್, ಪ್ರಾಧ್ಯಾಪಕರು, ಮನ:ಶಾಸ್ತ್ರ ವಿಭಾಗ, ನಿಮ್ಹಾನ್ಸ್, ಬೆಂಗಳೂರು ಮೊ: 9632603597 | ಸದಸ್ಯರು |
| 4 | ಶ್ರೀಮತಿ. ಮೀನಾಕ್ಷಿ, ಮಾನಸಿಕ ಆರೋಗ್ಯ ಶುಶ್ರೂಷಕರು,(ನಿವೃತ್ತ) ನಾಗರಭಾವಿ, 2ನೇ ಹಂತ, ಬೆಂಗಳೂರು. ಮೊ: 9844562232 | ಸದಸ್ಯರು |
| 5 | ಶ್ರೀಮತಿ. ರಶ್ಮಿ ಪ್ರಸಾದ್, ನಂ.236/2, 29ನೇ ಮುಖ್ಯರಸ್ತೆ, ಸಂದಿನಿ ಲೇಔಟ್, ಬೆಂಗಳೂರು. ಮೊ: 960639634 | ಸದಸ್ಯರು |
| 6 | ಶ್ರೀ. ಸೈಯದ್ ಜಮಾಲ್, ನಂ.66, ಸ್ಪನ್ಸರ್ ರಸ್ತೆ, ಫ್ರೇಜರ್ ಟೌನ್, ಬೆಂಗಳೂರು. | ಸದಸ್ಯರು |
| 7 | ಶ್ರೀ. ಕೆ.ವಿ ರಾಜಣ್ಣ, ಕೋಮರನಪುರ ಗ್ರಾಮ, ಯಳಂದೂರು ತಾಲ್ಲೂಕು, ಚಾಮರಾಜನಗರ ಜಿಲ್ಲೆ. ಮೊ: 8296839986 | ಸದಸ್ಯರು |
| 8 | ಶ್ರೀ. ಅನಂತ್ ನಾರಾಯಣ ಅಗಸ್ತ್ಯ, ನಂ.45, 7ನೇ ಕ್ರಾಸ್, ಸ್ವಿಮಿಂಗ್ ಪೂಲ್ ಬಡಾವಣೆ ಮಲ್ಲೇಶ್ವರಂ, ಬೆಂಗಳೂರು. ಮೊ: 9880631526 | ಸದಸ್ಯರು |
| 9 | ಡಾ. ಸ್ವಾಮಿನಾಥ್ ಗೋಪಾಲ್ ರಾವ್, ಚಿತ್ತ ಸಂಜೀವಿನಿ ಚಾರಿಟಬಲ್ ಟ್ರಸ್ಟ್, ಹೆಚ್.ಡಿ. ಕೋಟೆ, ಮೈಸೂರು ಜಿಲ್ಲೆ. ಮೊ: 9845007121 | ಸದಸ್ಯರು |
| 10 | ಶ್ರೀಮತಿ. ಬಿ.ಜಿ ಸುಮನ, ರಿಚ್ಮಂಡ್ ಫೆಲೋಶಿಪ್ ಸೊಸೈಟಿ ಜಯನಗರ, ಬೆಂಗಳೂರು. ಮೊ: 9845473873 | ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪದ್ಮ.ವಿ) 20/01/2020
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1 ಮತ್ತು 2)

**ಇವರಿಗೆ:**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.

2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ಉಪ ನಿರ್ದೇಶಕರು, (ಮಾನಸಿಕ ಆರೋಗ್ಯ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4. ವೈದ್ಯಕೀಯ ಸಲಹೆಗಾರರು, ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ಹಾಗೂ ಮುಖ್ಯಸ್ಥರು, ಮನೋವೈದ್ಯಕೀಯ ವಿಭಾಗ, ವಿಕ್ಟೋರಿಯಾ ಆಸ್ಪತ್ರೆ, ಬೆಂಗಳೂರು.
5. ನಿರ್ದೇಶಕರು, ನಿಮ್ಹಾನ್ಸ್, ಜಯನಗರ, ಬೆಂಗಳೂರು.
6. ನಿರ್ದೇಶಕರು, ನಿಮ್ಹಾನ್ಸ್, ಧಾರವಾಡ.
7. ಸರ್ಕಾರದ ಜಂಟಿ ಕಾರ್ಯದರ್ಶಿ/ಉಪಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ/ ಗೃಹ ಇಲಾಖೆ/ ಆರ್ಥಿಕ ಇಲಾಖೆ/ಕಾನೂನು ಇಲಾಖೆ/ ಮಹಿಳಾ & ಮಕ್ಕಳ ಅಭಿವೃದ್ಧಿ ಇಲಾಖೆ.
8. ಸರ್ಕಾರದ ಉಪಕಾರ್ಯದರ್ಶಿ-2, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಅಧಿಕಾರೇತರ ಸದಸ್ಯರುಗಳು (ಆಯುಕ್ತರ ಮುಖಾಂತರ)
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪಕಾರ್ಯದರ್ಶಿ-2 ರವರ ಆಪ್ತಸಹಾಯಕರು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

44

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 44 ಸಿಜಿಇ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 04-04-2020

**ಸೇರ್ಪಡೆ ಆದೇಶ**

ಸರ್ಕಾರದ ಆದೇಶ ಸಂಖ್ಯೆ: ಆಕುಕ 44 ಸಿಜಿಇ 2018, ದಿನಾಂಕ;20.01.2020ರ ಆದೇಶ ಭಾಗದ ಕೊನೆಯಲ್ಲಿ ಈ ಕೆಳಕಂಡ ಭಾಗವನ್ನು ಸೇರಿಸಿ ಓದಿಕೊಳ್ಳತಕ್ಕದ್ದು.

ಮಾನಸಿಕ ಆರೋಗ್ಯ ಆರೈಕೆ ಕಾಯಿದೆ 2017ರ ಸೆಕ್ಷನ್ 46(1)(h)ರನ್ವಯ ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರಕ್ಕೆ ಈ ಕೆಳಕಂಡ ಅಧಿಕಾರೇತರ ಸದಸ್ಯರನ್ನು ಮಾನಸಿಕ ಆರೋಗ್ಯ ವೃತ್ತಿಪರ ಸದಸ್ಯರನ್ನಾಗಿ ನೇಮಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಹೆಸರು | ಸದಸ್ಯರು |
|---|---|---|
| 1 | ಡಾ॥ ನಾರಾಯಣ ಪ್ರಕಾಶ್ ಬಿ, ಹಿತಾಯುರ್ವೇದ, 4ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಕೆ.ಆರ್.ಪುರಂ, ಹಾಸನ - 573201 | ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪದ್ಮ.ವಿ) 04/04/2020
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1 ಮತ್ತು 2)

04/04

ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ
ಸಂಖ್ಯೆ 130/6
ದಿನಾಂಕ 12/5/2020
ಬೆಂಗಳೂರು

ಇವರಿಗೆ:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ಉಪ ನಿರ್ದೇಶಕರು, (ಮಾನಸಿಕ ಆರೋಗ್ಯ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4. ವೈದ್ಯಕೀಯ ಸಲಹೆಗಾರರು, ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ಹಾಗೂ ಮುಖ್ಯಸ್ಥರು, ಮನೋವೈದ್ಯಕೀಯ ವಿಭಾಗ, ಸೆಂಚುನರಿ ಕಟ್ಟಡ, ವಿಕ್ಟೋರಿಯಾ ಆಸ್ಪತ್ರೆ, ಬೆಂಗಳೂರು.
5. ನಿರ್ದೇಶಕರು, ನಿಮ್ಹಾನ್ಸ್, ಜಯನಗರ, ಬೆಂಗಳೂರು.
6. ನಿರ್ದೇಶಕರು, ಡಿಮ್ಹಾನ್ಸ್, ಧಾರವಾಡ.
7. ಸರ್ಕಾರದ ಜಂಟಿ ಕಾರ್ಯದರ್ಶಿ/ಉಪಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ/ ಗೃಹ ಇಲಾಖೆ/ ಆರ್ಥಿಕ ಇಲಾಖೆ/ಕಾನೂನು ಇಲಾಖೆ/ ಮಹಿಳಾ & ಮಕ್ಕಳ ಅಭಿವೃದ್ಧಿ ಇಲಾಖೆ.
8. ಸರ್ಕಾರದ ಉಪಕಾರ್ಯದರ್ಶಿ-2, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

24/5/20

9. ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರದ ಅಧಿಕಾರೇತರ ಸದಸ್ಯರುಗಳು (ಆಯುಕ್ತರ ಮುಖಾಂತರ)
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪಕಾರ್ಯದರ್ಶಿ-2 ರವರ ಆಪ್ತ ಸಹಾಯಕರು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.